# 2 ವರ್ಷದಲ್ಲಿ 6 ಥಿಯೇಟರ್ ಬಂದ್

ಬೆಂಗಳೂರು: ಬೆಂಗಳೂರಿನ ಮತ್ತೊಂದು ಸಿಂಗಲ್ ಸ್ಕ್ರೀನ್ ಥಿಯೇಟರ್ ಬಾಗಿಲು ಹಾಕಿದ್ದು, ಬೆಂಗಳೂರಿನ ಅತಿದೊಡ್ಡ ಚಿತ್ರಮಂದಿರಗಳಲ್ಲಿ ಒಂದಾಗಿದ್ದ ಸ್ಯಾಂಕಿ ರಸ್ತೆಯ ?ಕಾವೇರಿ' ಚಿತ್ರಮಂದಿರ ಈಗ ಶಾಶ್ವತವಾಗಿ ಮುಚ್ಚಿದೆ ಎಂದು ಹೇಳಲಾಗಿದೆ.

ಹೌದು.. ಒಟಿಟಿ , ಮಲ್ಟಿಪ್ಲೆಕ್ ಇತ್ಯಾದಿ ಕಾರಣಗಳಿಂದ ಇತ್ತೀಚೆಗೆ ಚಿತ್ರಮಂದಿರಗಳು ಮುಚ್ಚುತ್ತಿದ್ದು, ಕಲೆಕ್ಷನ್, ಜನರ ಆಗಮನ ಕೂಡ ಕಡಿಮೆಯಾಗಿದ್ದು, ಹಲವು ಚಿತ್ರಮಂದಿರಗಳು ಮುಚ್ಚುವ ನಿರ್ಧಾರಕ್ಕೆ ಬಂದಿದೆ. ಇದೀಗ ಈ ಪಟ್ಟಿದೆ ಸ್ಯಾಂಕಿ ರಸ್ತೆಯ ?ಕಾವೇರಿ' ಚಿತ್ರಮಂದಿರ ಕೂಡ ಸೇರಿದ್ದು, ಸುಮಾರು 50 ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಕಾವೇರಿ ಚಿತ್ರ ಮಂದಿರ ಇದೀಗ ಶಾಶ್ವತವಾಗಿ ಮುಚ್ಚಲ್ಪಟ್ಟಿದೆ.
1974ರ ಜನವರಿ 11ರಂದು ಡಾ. ರಾಜ್‌ಕುಮಾರ್ ನಟನೆಯ 'ಬಂಗಾರದ ಪಂಜರ' (Bangarada Panjara) ಸಿನಿಮಾ ಪ್ರದರ್ಶನದ ಮೂಲಕ ??ಕಾವೇರಿ'' ಚಿತ್ರಮಂದಿರ ಶುರುವಾಗಿತ್ತು. ಅಂದಿನಿಂದ ಇಲ್ಲಿಯವರೆಗೂ ಈ ಚಿತ್ರ ಮಂದಿರದಲ್ಲಿ ಕನ್ನಡ, ತೆಲುಗು, ತಮಿಳು, ಹಿಂದಿ ಸೇರಿದಂತೆ ನಾನಾ ಭಾಷೆಯ ಚಿತ್ರಗಳು ತೆರೆಕಂಡಿದ್ದವು. ಸಿಂಗಲ್ ಸ್ಕ್ರೀನ್ ಆಗಿದ್ದರೂ ವಿಶಾಲವಾದ ಪಾರ್ಕಿಂಗ್ ವ್ಯವಸ್ಥೆ ಈ ಚಿತ್ರಮಂದಿರದಲ್ಲಿ ಇತ್ತು. ಈ ಚಿತ್ರಮಂದಿರದಲ್ಲಿ ಸಿನಿಮಾದ ಚಿತ್ರೀಕರಣ ಕೂಡ ನಡೆದಿದೆ. ಪುನೀತ್ ರಾಜ್‌ಕುಮಾರ್ ಅಭಿನಯದ 'ಪರಮಾತ್ಮ' ಸಿನಿಮಾದ ಆರಂಭಿಕ ಸೀನ್ ಅನ್ನು ಇಲ್ಲಿಯೇ ಶೂಟಿಂಗ್ ಮಾಡಲಾಗಿತ್ತು.

ಉತ್ತರ ಬೆಂಗಳೂರಿಗರಿಗೆ ಇದೊಂದು ಸಾಂಸ್ಕೃತಿಕ ಸ್ಥಳವೇ ಆಗಿತ್ತು. 'ಬಂಗಾರದ ಪಂಜರ, 'ಶಂಕರಾಭರಣಂ', 'ದಿಲ್‌ವಾಲೆ ದುಲ್ಹನಿಯಾ ಲೇ ಜಾಯೆಂಗೆ' ಸಿನಿಮಾಗಳು ಇಲ್ಲಿ 25 ವಾರ ಪ್ರದರ್ಶನ ಕಂಡಿದ್ದವು. ಈ ವರ್ಷ ಜನವರಿ 11ಕ್ಕೆ 50 ವರ್ಷ ಪೂರೈಸಿ, ಗೋಲ್ಡನ್ ಜ್ಯುಬಿಲಿ ಸಂಭ್ರಮಾಚರಣೆಯಲ್ಲಿತ್ತು. ಕಮಲ್ ಹಾಸನ್ ಅವರ 'ಇಂಡಿಯನ್' (1996) 100 ದಿನ, 'ಕಾಂತಾರ' 50 ದಿನಗಳ ಪ್ರದರ್ಶನ ಕಂಡಿದೆ. ಇದೀಗ ಈ ಭವ್ಯ ಇತಿಹಾಸದ ಚಿತ್ರಮಂದಿರಕ್ಕೆ ಬೀಗ ಬಿದ್ದಿದ್ದು, ಮುಂದೆ ಇಲ್ಲಿ ವಾಣಿಜ್ಯ ಕಟ್ಟಡ ತಲೆ ಎತ್ತುವ ಸಾಧ್ಯತೆ ಇದೆ. ಅದರಲ್ಲಿ ಮಲ್ಟಿ ಪ್ಲೆಕ್ಸ್ ಚಿತ್ರ ಮಂದಿರ ನಿರ್ಮಾಣ ಆಗುವ ಸಾಧ್ಯತೆಯೂ ಇದೆ.
ಇನ್ನು ಕಳೆದ 2 ವರ್ಷದಲ್ಲೇ ಬೆಂಗಳೂರಿನ 6 ಪ್ರಮುಖ ಥಿಯೇಟರ್ ಗಳು ಬೀಗ ಹಾಕಿವೆ. ಮೈಸೂರು ರಸ್ತೆಯಲ್ಲಿರುವ ನಳಂದಾ, ಉಮಾ, ಕೃಷ್ಣ, ಮೆಜೆಸ್ಟಿಕ್ ನಲ್ಲಿರುವ ಮೂವಿಲ್ಯಾಂಡ್, ತುಳಸಿ ಥಿಯೇಟರ್ ಗಳು ಈ ಹಿಂದೆ ಬಾಗಿಲು ಹಾಕಿದ್ದವು. ಇದೀಗ ಈ ಪಟ್ಟಿಗೆ ಇದೀಗ ಕಾವೇರಿ ಚಿತ್ರ ಮಂದಿರ ಸೇರ್ಪಡೆಯಾಗಿದೆ.

# ಸೂರ್ಯನಿಂದ 2 ಪ್ರಬಲ ಜ್ವಾಲೆಗಳು ಬಿಡುಗಡೆ

ಸೂರ್ಯನಿಂದ 2 ಪ್ರಬಲ ಜ್ವಾಲೆಗಳು ಬಿಡುಗಡೆ; ಭೂಮಿಯ ಮೇಲೆ ಇದರ ಪರಿಣಾಮಗಳೇನು ಅಂದರೆ ಬೇಸಿಗೆಯಲ್ಲಿ ಭೂಮಿಯನ್ನು ಸುಡುತ್ತಿರುವ ಸೂರ್ಯನಿಂದ 2 ಪ್ರಬಲ ಜ್ವಾಲೆಗಳು ಬಿಡುಗಡೆಯಾಗಿದೆ. 11 ವರ್ಷಕ್ಕೊಮ್ಮೆ ಸಂಭವಿಸುವ ಸೂರ್ಯನ ಆಯಸ್ಕಾಂತೀಯ ಕ್ಷೇತ್ರದ ಆವರ್ತ ಇದಾಗಿದ್ದು, ಈ ಹಂತದಲ್ಲಿ ಸೂರ್ಯನ ಉತ್ತರ ಮತ್ತು ದಕ್ಷಿಣ ಧ್ರುವಗಳು ಸ್ಥಳ ಬದಲಾಗುತ್ತವೆ. ಉತ್ತರ ಮತ್ತು ದಕ್ಷಿಣ ಧ್ರುವಗಳು ಬದಲಾಗುವುದಕ್ಕೂ ಮುಂಚೆ ಇದ್ದ ಸ್ಥಿತಿಗೆ ಮರಳಲು ಮತ್ತೆ 11 ವರ್ಷಗಳ ಅವಧಿ ತೆಗೆದುಕೊಳ್ಳುತ್ತದೆ. ಪ್ರಸಕ್ತ ಸೌರ ಚಕ್ರದಲ್ಲಿ ಸೂರ್ಯನ ಚಟುವಟಿಕೆಯು ಗರಿಷ್ಠ ಪ್ರಮಾಣದಲ್ಲಿದೆ. ಈ ವೇಳೆ ಸೂರ್ಯನಿಂದ ಹಲವು ಪ್ರಖರ ಜ್ವಾಲೆಗಳು ಬಿಡುಗಡೆಗೊಂಡು ಭೂಮಿಯ ಮೇಲೆಯೂ ಇದು ಪರಿಣಾಮ ಉಂಟುಮಾಡುತ್ತದೆ. ಸನ್ ಸ್ಪಾಟ್ ಪ್ರದೇಶ ೦ಖ3663 ರಲ್ಲಿ ಕೆಲವೇ ದಿನಗಳ ಹಿಂದೆ 2 ಬೃಹತ್ ಸೌರ ಜ್ವಾಲೆಗಳು ಬಿಡುಗಡೆಯಾಗಿದ್ದು, ಭೂಮಿಗೆ ಮುಖಮಾಡಿವೆ. ಮೇ.02 ರಂದು ಬಿಡುಗಡೆಯಾಗಿರುವ ಬೃಹತ್ ಸೌರ ಜ್ವಾಲೆ, ಸೌರ ಜ್ವಾಲೆಗಳ ಪೈಕಿಯೇ ಅತ್ಯಂತ ಪ್ರಬಲವಾದ ಎಕ್ಸ್– ಶ್ರೇಣಿಯ ಜ್ವಾಲೆಗಳಾಗಿವೆ ಎಂದು ಸ್ಪೇಸ್.ಕಾಮ್ ಹೇಳಿದೆ. ಈ ರೀತಿಯ ಜ್ವಾಲೆಗಳ ಪರಿಣಾಮವಾಗಿ ಆಸ್ಟ್ರೇಲಿಯಾ, ಜಪಾನ್, ಚೀನಾದ ಬಹುತೇಕ ಪ್ರದೇಶಗಳಲ್ಲಿ ರೇಡಿಯೋ ಬ್ಲ್ಯಾಕೌಟ್ (ರೇಡಿಯೊ ಸಂವಹನಗಳಲ್ಲಿ ದೀರ್ಘಾವಧಿಯ ಅಡಚಣೆ) ನ್ನುಂಟುಮಾಡಿದೆ. "ಫ ಜ್ವಾಲೆ! ಸನ್‌ಸ್ಪಾಟ್ ಪ್ರದೇಶ ೦ಖ3663 ಫ1.7 ಜ್ವಾಲೆಯನ್ನು ಉತ್ಪಾದಿಸಿತು, ಇದು ಈ ಚಕ್ರದಲ್ಲಿ ಇದುವರೆಗಿನ 11 ನೇ ಅತಿದೊಡ್ಡ ಜ್ವಾಲೆಯಾಗಿದೆ. ಇದು ಒಟ್ಟು 25 ನಿಮಿಷಗಳ ಕಾಲ ಇದ್ದು 02:22 U.T ವರೆಗೆ ಉತ್ತುಂಗಕ್ಕೇರಿತು ಎಂದು ಸೌರ ಭೌತಶಾಸ್ತ್ರಜ್ಞ ಕೀತ್ ಸ್ಟ್ರಾಂಗ್ ಬರೆದಿದ್ದಾರೆ. ಟ್ವಿಟರ್ ನಲ್ಲಿ ಬರೆದಿದ್ದಾರೆ. ಎರಡನೇ ಜ್ವಾಲೆ ಮೇ.03 ರಂದು ಬಿಡುಗಡೆ ಮಾಡಿದ್ದು, ಎಂ–ಶ್ರೇಣಿಯ ಜ್ವಾಲೆ ಇದಾಗಿದೆ ಎಂದು ಸ್ಪೇಸ್.ಕಾಮ್ ತಿಳಿಸಿದೆ. ಹೊಸದಾಗಿ ಹೊರಹೊಮ್ಮಿದ ಸನ್‌ಸ್ಪಾಟ್ ಸೂರ್ಯನ ಮೇಲ್ಮೈಯಲ್ಲಿ ಹಲವಾರು ಜ್ವಾಲೆಗಳುಹೊರಹೊಮ್ಮುವುದಕ್ಕೆ ಸಾಕ್ಷಿಯಾಗಿದೆ. ಇತ್ತೀಚೆಗೆ ಬಿಡುಗಡೆಯಾದ ಜ್ವಾಲೆಗಳು ಭೂಮಿಯತ್ತ ಮುಖ ಮಾಡಿದ್ದವು ಹಾಗೂ ಈ ಸೌರ ಜ್ವಾಲೆಗಳ ಪೈಕಿ ಒಂದರಲ್ಲಾದರೂ ಕರೋನಲ್ ಮಾಸ್ ಎಜೆಕ್ಷನ್ (CME) ಜೊತೆಯಾಗಿದ್ದಿರಬಹುದು ಎಂದು ವಿಶ್ಲೇಷಿಸಲಾಗುತ್ತಿದೆ. ಪ್ಲಾಸ್ಮಾ ಮತ್ತು ಕಾಂತೀಯ ಕ್ಷೇತ್ರದ ಬೃಹತ್ ಪ್ರಮಾಣದ ಬಿಡುಗಡೆಯನ್ನು ಸಿಎಂಇ ಎಂದುಹೇಳುತ್ತಾರೆ.Space.com ಪ್ರಕಾರ, ಭೂಮಿಯತ್ತ ಧಾವಿಸಿರುವ CME ಪವರ್ ಗ್ರಿಡ್‌ಗಳು, ದೂರಸಂಪರ್ಕ ಜಾಲಗಳು ಮತ್ತು ಕಕ್ಷೆಯಲ್ಲಿರುವ ಉಪಗ್ರಹಗಳ ವಿನಾಶವನ್ನುಂಟುಮಾಡುತ್ತದೆ, ಜೊತೆಗೆ ಗಗನಯಾತ್ರಿಗಳನ್ನು ಅಪಾಯಕಾರಿ ಪ್ರಮಾಣದ ವಿಕಿರಣಕ್ಕೆ ಒಡ್ಡುತ್ತದೆ.

ನಾಸಾದ ಪ್ರಕಾರ, ಸೂರ್ಯನ ಮತ್ತು ಅದರ ಸುತ್ತಲಿನ ಶಕ್ತಿಯುತ ಕಾಂತೀಯ ಕ್ಷೇತ್ರಗಳು ಮರುಸಂಪರ್ಕಿಸಿದಾಗ ಸೌರ ಜ್ವಾಲೆಗಳು ಸಂಭವಿಸುತ್ತವೆ. ಸೌರ ವಾತಾವರಣದಲ್ಲಿ ಕಾಂತೀಯ ಶಕ್ತಿಯು ಸಂಗ್ರಹವಾದಾಗ ಮತ್ತು ಬಿಡುಗಡೆಯಾದಾಗ ಈ ಜ್ವಾಲೆಗಳು ಸೃಷ್ಟಿಯಾಗುತ್ತವೆ. ಅವುಗಳ ಶಕ್ತಿಗೆಅನುಗುಣವಾಗಿ ಈ ಜ್ವಾಲೆಗಳನ್ನು ವಿಭಾಗಿಸಲಾಗಿದ್ದು, ಈ ಪೈಕಿ X-class ಜ್ವಾಲೆಗಳು ಪ್ರಬಲವಾಗಿದ್ದರೆ, ಎಂ–class ಜ್ವಾಲೆಗಳು ಫಗಿಂತಲೂ 10 ಪಟ್ಟು ಕಡಿಮೆ ತೀವ್ರತೆ ಹೊಂದಿರುತ್ತವೆ ಈ ನಂತರದ ಸ್ಥಾನಗಳಲ್ಲಿ ಸಿ–ಕ್ಲಾಸ್, ಬಿ ಕ್ಲಾಸ್ ಜ್ವಾಲೆಗಳಿವೆ.

# ಜಿಲ್ಲಾ ಕಾರಾಗೃಹದಲ್ಲಿ 'ಪೋಷ್' ಕಾರ್ಯಕ್ರಮ ಯಶಸ್ವಿ



ಕೊಪ್ಪಳ, ಮೇ 04 : ಜಿಲ್ಲಾ ಕಾರಾಗೃಹ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘದ ಸಹಯೋಗದಲ್ಲಿ ಮೇ 03 ರಂದು ಜಿಲ್ಲಾ ಕಾರಾಗೃಹದಲ್ಲಿ ಪೋಷ್ (POSH-Prevention of sexual harassment act-2013) ಬಗ್ಗೆ ಅರಿವು–ನೆರವು ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎ.ವಿ.ಕಣವಿ ಹಾಗೂ ವಕೀಲರು ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿವಲೀಲಾ ಹೊನ್ನೂರು, ಕಾರಾಗೃಹದ ಅಧೀಕ್ಷಕರಾದ ವಿ.ಡಿ. ಚವ್ಹಾಣ, ಜೈಲರ್‌ರಾದ ರಾಮುಲು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸರೋಜಿನಿ ಕೋಲಾರ ನಿಧನ



ಗೋಕಾಕ–:ಗೋಕಾಕದ ಗಣ್ಯ ಅ ರ ಳಿ ವ್ಯಾಪಾರಸ್ಥರಾದ ಪ್ರಕಾಶ ಮಲ್ಲಿಕಾರ್ಜುನ ಕೋಲಾರ ವ ರ (ತಾಯಿ) ನಾಕಾ ನಂ1ಹತ್ತಿರದ ನಿವಾಸಿ ಶ್ರೀಮತಿ ಸರೋಜಿನಿ ಮಲ್ಲಿಕಾರ್ಜುನ ಕೋಲಾ ರ (73) ದಿ 3ರಂದು ನಿಧನರಾದರು. ಮೃತರ ಇಬ್ಬರು ಪುತ್ರರು ಸೊಸೆಯಂದಿರು ಮೊಮ್ಮಕ್ಕ ಳು ಸೇರಿದಂತೆ ಅಪಾರ ಬಂಧು ಬಳಗ ಬಿಟ್ಟು ಅಗಲಿದ್ದಾರೆ.

# ಚಿತ್ತಾರಗಳಿಂದ ಕಂಗೊಳಿಸುವ ಮತಗಟ್ಟೆಗಳು ಮತದಾರರಲ್ಲಿ ಹುಮ್ಮಸು

## ಮೂಡಿಸಿದ ತಾಲೂಕು ಸ್ವೀಪ್ ಕಾರ್ಯಚಟುವಟಿಕೆ / ಸ್ಥಳೀಯ ಅಂಶಗಳಿಗೆ ಮನ್ನಣೆ



ಲಕ್ಷ್ಮೇಶ್ವರ: ತಾಲೂಕು ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ, ತಾಲೂಕು ಸ್ವೀಪ್ ಸಮಿತಿ ಮತದಾರರನ್ನು ಆಕರ್ಷಿಸಲು ವಿಶೇಷ ಪ್ರಯತ್ನಕ್ಕೆ ಮುಂದಾಗಿದೆ. ಪಾರಂಪರಿಕ ವೃತ್ತಿ, ಸಾಂಸ್ಕೃತಿಕ ಕಲೆ ಹಾಗೂ ಸ್ಥಳೀಯರ ಅಭಿಲಾಷೆಯನ್ನು ಅರಿತು ಮತದಾನ ಕೇಂದ್ರಗಳನ್ನು ವಿಶೇಷ ಚಿತ್ತಾರಗಳಿಂದ ಕಂಗೊಳಿಸುವಂತೆ ಮಾಡಲಾಗಿದೆ.

ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯ ಪುರಸಭೆ ಹಾಗೂ ಗ್ರಾಮೀಣ ಭಾಗಗಳು ಸೇರಿ ಒಟ್ಟು 5 ಮತಗಟ್ಟೆಗಳನ್ನು ಆಕರ್ಷಕಗೊಳಿಸಲು ಯೋಜನೆ ರೂಪಿಸಲಾಗಿತ್ತು. ಇದಕ್ಕಾಗಿ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಜಿಲ್ಲಾಡಳಿತ ಮೂರು ಥೀಮ್ (ವಿಷಯ)ಗಳನ್ನು ಆಯ್ಕೆ ಮಾಡಿ, ಮತಗಟ್ಟೆಗಳನ್ನು ಪೇಂಟಿಂಗ್ ಮೂಲಕ ಆಕರ್ಷಕಗೊಳಿಸಿದೆ. ಸಖಿ ಮತಗಟ್ಟೆ, ಯುವ ಮತಗಟ್ಟೆ ಮತ್ತು ಶಿಗ್ಲಿ ಗ್ರಾಮದ ಪಾರಂಪರಿಕ ವೃತ್ತಿಯಾದ ನೇಕಾರಿಕೆಯ ಚಿತ್ರಗಳ ಕಣ್ಮನ ಸೆಳೆಯುವಂತಿವೆ.

ಪಾರಂಪರಿಕ ಮತಗಟ್ಟೆ: ಶಿಗ್ಲಿ ಗ್ರಾಮದ ಮತಗಟ್ಟೆ ಸಂಖ್ಯೆ: 202, 203 ಮತ್ತು 204 ಗಳನ್ನು ಪಾರಂಪರಿಕ ಮತಗಟ್ಟೆಗಳಾಗಿ ರೂಪಿಸಲಾಗಿದೆ. ಸ್ಥಳೀಯ ಪಾರಂಪರಿಕ ಕೈಮಗ್ಗದ ನೇಕಾರಿಕೆ ವೃತ್ತಿಯ ಚಿತ್ರಗಳಿಗೆ ಇಲ್ಲಿ ಆದ್ಯತೆ ನೀಡಲಾಗಿದೆ. ಶಿಗ್ಲಿ ಸೀರೆಯಿಂದಲೇ ಹೆಸರುವಾಸಿಯಾದ ಗ್ರಾಮ ಇದಾಗಿದ್ದು, ಈಗಲೂ ಇಲ್ಲಿನ ನೂರಾರು ಕುಟುಂಬಗಳು ಕೈಮಗ್ಗ ನೇಕಾರಿಕೆ ವೃತ್ತಿಯನ್ನು ಮುಂದುವರಿಸಿಕೊಂಡು ಬಂದಿವೆ. ಸ್ಥಳೀಯರ ಆಶಯಕ್ಕೆ ತಕ್ಕಂತೆ ಇಲ್ಲಿನ ಮೂರು ಮತಗಟ್ಟೆಗಳನ್ನು ಮಾದರಿ ಮತಗಟ್ಟೆಗಳಾಗಿ ಚಿತ್ರರೂಪದಲ್ಲಿ ಕಂಗೊಳಿಸಲಿವೆ. ಶಿಗ್ಲಿ ಸೀರೆ ತಯಾರಿಕೆಯ ಕೈಮಗ್ಗ ಮಾದರಿ ಹಾಗೂ ಸಿದ್ಧವಾದ ಸೀರೆಯ ಆಕೃತಿಗಳು ಮತಗಟ್ಟೆಯ ಗೋಡೆಯ ಮೇಲೆ ಬಣ್ಣದ ರೂಪ ಪಡೆದು ಚಿತ್ತಾಕರ್ಷಕವಾಗಿವೆ. ಓಟು ನಮ್ಮ ಶಕ್ತಿ, ಮತ ನೀಡಿ ಕರ್ತವ್ಯ ಪಾಲಿಸಿ, ಭರವಸೆಯ ನಾಳೆಗಾಗಿ ನಮ್ಮ ಮತ ಎಂಬ ಬರವಣಿಗೆಯ ಸಾಲುಗಳು ಮತದಾರರಲ್ಲಿ ಮತದಾನ ಮಾಡಬೇಕೆಂಬ ಪ್ರಜ್ಞೆ ಜಾಗೃತಗೊಳಿಸಲು ಪೂರಕವಾಗಿವೆ.

ಸಖಿ ಮತಗಟ್ಟೆ: ನಗರದ ಬಸ್ತಿಬಣ ಪ್ರದೇಶದಲ್ಲಿಯ ಮತಗಟ್ಟೆ ಸಂಖ್ಯೆ– 108 ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ–4 ಅನ್ನು ಸಖಿ ಮತಗಟ್ಟೆಯಾಗಿ ಚಿತ್ರಿಸಲಾಗಿದೆ. ಸಂಪೂರ್ಣ ಮತಗಟ್ಟೆಗೆ ಗುಲಾಬಿ ಬಣ್ಣದಲ್ಲಿ ಹಚ್ಚಲಾಗಿದ್ದು, ಮಹಿಳೆಯ ತೋರು ಬೆರಳನ್ನು ಹಣೆಯ ಸಿಂಧೂರದ ಭಾಗಕ್ಕೆ ಮತದಾನದ ಶಾಯಿ ಬರುವ ಹಾಗೆ ಚಿತ್ರ ಬಿಡಿಸಲಾಗಿದೆ. ಮತದಾನ ಪ್ರಜಾಪ್ರಭುತ್ವ ಗಟ್ಟಿಯಾಗುವ ಸಂಕೇತವನ್ನು ಸೂಚಿಸುವಂತಿದೆ. ಜತೆಗೆ ಮತ ನೀಡಿ ಕರ್ತವ್ಯ ಪಾಲಿಸಿ, ನಿಮ್ಮ ಮತ ನಿಮ್ಮ ಶಕ್ತಿ, ಭ್ರಷ್ಟಾಚಾರ ಅಳಿಸಿ ಮತ ಚಲಾಯಿಸಿ, ಮತದಾನ ನಮ್ಮ ಹಕ್ಕು ಬರವಣಿಗೆಯ ಸಾಲುಗಳು ಮತದಾನದ ಮಹತ್ವವನ್ನು ಸಾರುತ್ತಿವೆ.

ಐತಿಹಾಸಿಕ ಮತಗಟ್ಟೆ: ಲಕ್ಷ್ಮೇಶ್ವರದ ಅಂಬೇಡ್ಕರ್ ನಗರದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿಯ ಮತಗಟ್ಟೆ ಸಂಖ್ಯೆ– 118ನ್ನು ಐತಿಹಾಸಿಕ ವಿಷಯ ಚಿತ್ರಗಳಿಂದ ಕಂಗೊಳಿಸುವಂತೆ ಮಾಡಲಾಗಿದೆ. ತಪ್ಪದೆ ಮತದಾನ ಮಾಡಿ, ಮತದಾನ ಮಾಡುವುದು ನಿಮ್ಮ ಜವಾಬ್ದಾರಿ ಮತ್ತು ಹಕ್ಕು, ಯೋಚಿಸಿ ಮತದಾನ ಮಾಡಿ, ನಿಮ್ಮ ಮತವನ್ನು ಮಾರಬೇಡಿ, ನಿಮ್ಮ ಮತ ನಾಡಿಗೆ ಹಿತ ಎಂಬ ಸಾಲುಗಳು ಮತದಾರರ ಹಕ್ಕು ಮತ್ತು ಜವಾಬ್ದಾರಿಯ ಅರಿವು ಮೂಡಿಸಲಿವೆ.

ಯುವ ಮತಗಟ್ಟೆ: ಬಟ್ಟೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಮತಗಟ್ಟೆ ಸಂಖ್ಯೆ– 76 ಕುಂದ್ರಳ್ಳಿ ತಾಂಡಾದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಮತಗಟ್ಟೆಯನ್ನು ಯುವ ಮತಗಟ್ಟೆಯನ್ನಾಗಿ ರೂಪಿಸಲಾಗಿದೆ. ಯುವ ಮತದಾರರು ಉಲ್ಲಾಸಿತರಾಗಿ ಮತ ಚಲಾವಣೆಯಲ್ಲಿ ತೊಡಗಿರುವಂತೆ ಚಿತ್ರರೂಪದಲ್ಲಿ ಬಿಡಿಸಲಾಗಿದೆ. ಅಲ್ಲದೆ ಯುವ ಶಕ್ತಿ ದೇಶದ ಶಕ್ತಿ, ನಿಮ್ಮ ಮತ ಮಾರಿಕೊಳ್ಳಬೇಡಿ, ನಿಮ್ಮ ಒಂದು ಮತವು ಮುಂದಿನ ದೊಡ್ಡ ಬದಲಾವಣೆಯಾಗಬಹುದು ಎಂಬ ಬರಹದ ಸಾಲುಗಳು ಯುವ ಮತದಾರರನ್ನು ಭವಿಷ್ಯದ ಕುರಿತು ಯೋಚಿಸಿ ಮತಚಲಾಯಿಸುವಂತೆ ಪ್ರೇರಣೆ ನೀಡಲಿದೆ.ಕೋಟ್.ಲೋಕಸಭೆ ಚುನಾವಣೆಗೆ ಮೇ 7ರಂದು ಮತದಾನ ಜರುಗಲಿದೆ. ಮತಗಟ್ಟೆಗಳಿಗೆ ಸ್ಥಳೀಯ ಐತಿಹಾಸಿಕ, ಪಾರಂಪರಿಕ ವೃತ್ತಿಗಳ ಚಿತ್ತಾರಳಿಂದ ಆಕರ್ಷಕಗೊಳಿಸಲಾಗಿದೆ. ಅಲ್ಲದೆ, ತಾಲೂಕು ವ್ಯಾಪ್ತಿಯಲ್ಲಿ ಈಗಾಗಲೇ ತಪ್ಪದೆ ಮತ ಚಲಾಯಿಸುವಂತೆ ಹಲವು ಕಾರ್ಯಕ್ರಮ ಹಮ್ಮಿಕೊಂಡು ಜಾಗೃತಿ ಮೂಡಿಸಲಾಗಿದೆ.

ಕೃಷ್ಣಪ್ಪ ಧರ್ಮರ

# ತಿಲಕವಾಡಿ ಪೊಲೀಸರಿಂದ ಕಳ್ಳನ ಬಂಧನ 4 ಲಕ್ಷ ಮೌಲ್ಯದ ಬಂಗಾರದ ಆಭರಣ ಜಪ್ತು



ಬೆಳಗಾವಿ–:ದಿನಾಂಕ 13–4–2024 ಹಾಗು 21.4.2024 ರಂದು ತಿಲಕವಾಡಿ ಮಹಾವೀರ್ ಭವನ ಹಾಗೂ ಸಿಟಿ ಹಾಲ್ ಮದುವೆ ಸಮಾರಂಭಗಳಲ್ಲಿ ಆಭರಣಗಳನ್ನು ಕಳ್ಳತನ ಮಾಡಿ ಪರಾರಿಯಾಗಿದ್ದ ಆರೋಪಿ– ಸೋಹೈಲ್ ಮೌಲಾ ತಾಶಾವಾಲೆ (26 ವರ್ಷ) ಸಾ.ಉಜ್ವಲ ನಗರ ಬೆಳಗಾವಿಈತನನ್ನು ಶ್ರೀ ಕಪಿಲ್ ದೇವ್ ಗಡದ ಪಿ.ಐ ತಿಲಕವಾಡಿ ಠಾಣೆ ಹಾಗೂ ಅವರ ತಂಡ ಪತ್ತೆ ಮಾಡಿ, ಅವನು ಕಳ್ಳತನ ಮಾಡಿದ 4 ಲಕ್ಷ 10,000 ಮೌಲ್ಯದ ಒಟ್ಟು 58.4 ಗ್ರಾಂ ಬಂಗಾರದ ಆಭರಣಗಳನ್ನು ವಶಪಡಿಸಿಕೊಂಡು, ಆತನ ವಿರುದ್ಧ ಕಾನೂನು ಕ್ರಮ ಜರುಗಿಸಿ ತನಿಖೆ ಮುಂದುವರೆಸಲಾಗಿದೆ. ಈ ಪ್ರಕರಣಗಳಲ್ಲಿಯ ಆರೋಪಿತನನ್ನು ಬಂಧಿಸುವಲ್ಲಿ ಶ್ರಮಿಸಿದ ಪಿಐ ತಿಲಕವಾಡಿ ಹಾಗೂ ಅವರ ತಂಡವನ್ನು ಮಾನ್ಯ ಪೊಲೀಸ್ ಆಯುಕ್ತರು ಬೆಳಗಾವಿ ನಗರ ಹಾಗೂ ಡಿಸಿಪಿಗಳು ಶ್ಲಾಘಿಸಿರುತ್ತಾರೆ.

# ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪೆನ್ ಡ್ರೈವ್ ಪ್ರಕರಣ ಬೇಧಿಸಲು (ಎಸ್‌ಐಟಿ) ವಿಶೇಷ ತನಿಖಾ ತಂಡ ರಚನೆ



ವಿಜಯಪುರ–: ಹಾಲಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಕೇಳಿಬರುತ್ತಿರುವ ಲೈಂಗಿಕ ದೌರ್ಜನ್ಯದ ಪೆನ್ ಡ್ರೈವ್ ಸಿಕ್ಕಿರುವ ಪ್ರಕರಣ ಇದೀಗ ರಾಜ್ಯ ಹಾಗೂ ರಾಷ್ಟ್ರ ರಾಜಕಾರಣದಲ್ಲಿ ದೊಡ್ಡ ಬಿರುಗಾಳಿಯನ್ನೇ ಎಬ್ಬಿಸಿದೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸರ್ಕಾರ ಇದಕ್ಕಾಗಿ ಎಡಿಜಿಪಿ ಬಿ ಕೆ ಸಿಂಗ್ ಅವರ ನೇತೃತ್ವದಲ್ಲಿ (ಎಸ್‌ಐಟಿ) ವಿಶೇಷ ತನಿಖಾ ತಂಡವನ್ನು ರಚಿಸಿದೆ. ಎಡಿಜಿಪಿ ಬಿ.ಕೆ ಸಿಂಗ್ ಅವರು ಈ ಹಿಂದೆ ಗೌರಿ ಲಂಕೇಶ್ ಹತ್ಯೆ ಪ್ರಕರಣದಲ್ಲಿ ಎಸ್‌ಐಟಿ ಮುಖ್ಯಸ್ಥರಾಗಿದ್ದರು. 3 ಎಸ್‌ಪಿ, 4 ಡಿವೈಎಸ್‌ಪಿ ಗಳನ್ನೊಳಗೊಂಡ ಎಸ್‌ಐಟಿ ರಚನೆಯಾಗಿದ್ದು, ಮೂವರು ಎಸ್‌ಪಿಗಳಲ್ಲಿ ಓರ್ವ ಮಹಿಳಾ ಎಸ್‌ಪಿ ಕೂಡ ಇದ್ದಾರೆ. ನಾವು (ಸರ್ಕಾರ) ಜಃಟಇಾತನಿಖೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಅವರು ಗೃಹ ಸಚಿವ ಜಿ.ಪರಮೇಶ್ವರ ಅವರು ತಿಳಿಸಿದ್ದಾರೆ.
ಈ ಸಂಬಂಧ ಎಕ್ಸ್ನಲ್ಲಿ ಪೋಸ್ಟ್ ಹಾಕಿರುವ ಸಿಎಂ ಸಿದ್ದರಾಮಯ್ಯ ಅವರೂ ಹಾಸನ ಜಿಲ್ಲೆಯಲ್ಲಿ ಅಶ್ಲೀಲ ವೀಡಿಯೋ ತುಣುಕುಗಳು ಹರಿದಾಡುತ್ತಿದ್ದು, ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಈ ಹಿನ್ನೆಲೆಯಲ್ಲಿ ಎಸ್‌ಐಟಿ ತನಿಖೆ ನಡೆಸುವಂತೆ ಮಹಿಳಾ ಆಯೋಗದ ಅಧ್ಯಕ್ಷರು ಸರ್ಕಾರಕ್ಕೆ ಪತ್ರ ಬರೆದಿದ್ದರು. ಅವರ ಮನವಿಗೆ ಸ್ಪಂದಿಸಿ ಈ ನಿರ್ಣಯ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.
ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಅವರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಹೇಳಲಾಗುತ್ತಿರುವ ಸಾಕಷ್ಟು ವಿಡಿಯೊಗಳ ಸಾಕ್ಷಿಗಳಿವೆ ಎಂಬ ಆರೋಪ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡವನ್ನು ರಚಿಸಿ ತನಿಖೆ ಆರಂಭಿಸಿರುವ ಕ್ರಮವನ್ನು ರಾಜ್ಯ ಮಹಿಳಾ ಆಯೋಗ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಸ್ವಾಗತಿಸಿದ್ದಾರೆ.

ಹಾಸನ ಸಂಸದ ಪ್ರಜ್ವಲ್ ರೇವಣ್ಣರದ್ದು ಎನ್ನಲಾದ ಹಲವು ವಿಡಿಯೊಗಳು ಎರಡು ಮೂರು ಪೆನ್‌ಡ್ರೈವ್‌ಗಳಲ್ಲಿ ಹಾಸನ ಜಿಲ್ಲೆಯಾದ್ಯಂತ ಹರಿದಾಡುತ್ತಿವೆ ಎಂದು ಸಾಮಾಜಿಕ ಜಾಲತಾಣದಲ್ಲಿ ಚರ್ಚೆ ಆಗುತ್ತಿತ್ತು. ಒಂದಲ್ಲ, ಎರಡಲ್ಲ ಸಾವಿರಾರು ವಿಡಿಯೋಗಳಿವೆ ಎಂದು ಹೇಳಲಾಗಿದೆ. ಹಲವು ಮಹಿಳೆಯರೊಂದಿಗೆ ಲೈಂಗಿಕ ದೌರ್ಜನ್ಯ ನಡೆಸಿದ್ದಾರೆಂಬ ಆರೋಪ ಕೇಳಿಬಂದಿದ್ದು, ಟ್ವಿಟರ್ ಸೇರಿದಂತೆ ಸೋಷಿಯಲ್ ಮಿಡಿಯಾಗಳ ಮೂಲಕವೂ ವಿಡಿಯೋ ವೈರಲ್ ಆಗುತ್ತಿವೆ. ಆದರೆ ಇದು ಮಾರ್ಫ್ ಮಾಡಲಾದ ವಿಡಿಯೋ ಎಂದು ಪ್ರಜ್ವಲ್ ರೇವಣ್ಣ ಪ್ರತಿಕ್ರಿಯಿಸಿದ್ದರು. ಆದರೆ ಇನ್ನೊಂದೆಡೆ ಇದು ನೈಜ ವಿಡಿಯೋ ಎಂದು ಹೇಳಲಾಗುತ್ತಿದೆ. ಇದು ರಾಜ್ಯ ಮಹಿಳಾ ಆಯೋಗದ ಕೈ ಸೇರಿತ್ತು. ಇದರ ಬಗ್ಗೆ ತನಿಖೆ ನಡೆಸುವಂತೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ಸಿಎಂಗೆ ಪತ್ರ ಬರೆದಿದ್ದರು.

ಹಾಸನ ಸಂಸದ ಪ್ರಜ್ವಲ್ ರೇವಣ್ಣರಿಗೆ ಸಂಬಂಧಪಟ್ಟವುಗಳು ಎಂದು ಹೇಳಲಾಗುತ್ತಿರುವ ವಿಡಿಯೊಗಳನ್ನು ಒಳಗೊಂಡಿರುವ ಪೆನ್ ಡ್ರೈವ್‌ನ್ನು ಕಂಪ್ಯೂಟರ್‌ಲ್ಲಿ ಹಾಕಿದ್ದು ನಿಜ. ಆದರೆ ನನಗೆ ನೋಡಲು ಬಹಳ ಕಷ್ಟವಾಯಿತು. ಅದರ ಬಗ್ಗೆ ಮಾಹಿತಿ ತಿಳಿದುಕೊಂಡಾಗ ಬಹಳಷ್ಟು ಹೆಣ್ಣುಮಕ್ಕಳ ವಿಡಿಯೊಗಳು ಅದರಲ್ಲಿವೆ. ಸಾಕಷ್ಟು ಮಹಿಳೆಯರು ನೊಂದಿದ್ದಾರೆ. ಸಾಕಷ್ಟು ಮಹಿಳೆಯರ ಲೈಗಿಂಕ ಚಿತ್ರಣ ಮಾಲಾಗಿದೆ. ಪೆನ್ ಡ್ರೈವ್ ನಲ್ಲಿ ದೌರ್ಜನ್ಯದ ವಿಡಿಯೋಗಳಿವೆ. ಅಧಿಕಾರ ಹಾಗೂ ಸ್ಥಾನ ದೂರುಪಯೋಗ ಮಾಡಿಕೊಂಡು ಮಹಿಳೆಯರ ಅಸಹಾಯಕತೆ ಬಳಸಿಕೊಂಡು ಲೈಂಗಿಕ ಚಿತ್ರಿಕರಣ ಮಾಡಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಲೈಂಗಿಕ ಚಿತ್ರೀಕರಣ ಮಾಡಿರುವುದು ನಿಜ, ಕಿರುಕುಳ ನೀಡಿದ ವ್ಯಕ್ತಿಯೇ ಕೈಯಲ್ಲಿ ಮೊಬೈಲ್ ಹಿಡಿದುಕೊಂಡು ಚಿತ್ರೀಕರಣ ಮಾಡಿದ್ದಾರೆ. ಈ ರೀತಿಯ ಕೃತ್ಯ ಮೊದಲ ಬಾರಿಗೆ ಆಗಿದ್ದು ಎಂದು ಕಾಣುತ್ತದೆ, ಸಾವಿರಾರು ಮಹಿಳೆಯರು ಒಬ್ಬ ವ್ಯಕ್ತಿಯ ಕೈಯಲ್ಲಿ ಸಿಕ್ಕಿಹಾಕಿಕೊಂಡಿದ್ದಾರೆ. ಇದರಲ್ಲಿ ಸಾವಿರಾರು ಹೆಣ್ಣುಮಕ್ಕಳ ಭವಿಷ್ಯವಿದೆ ಎಂದು ಕಳಕಳಿಯಿಂದ ಎರಡು ದಿನಗಳ ಹಿಂದೆ ಮುಖ್ಯಮಂತ್ರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಪತ್ರ ಬರೆದೆ. ಕೂಡಲೇ ಮುಖ್ಯಮಂತ್ರಿಗಳು ಕ್ರಮ ಕೈಗೊಂಡಿರುವುದು ತೃಪ್ತಿ ತಂದಿದೆ. ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಚಿತ್ರೀಕರಣ ಮಾಡಿದವರು ಮತ್ತು ವಿತರಿಸಿದವರು ಇಬ್ಬರಿಗೂ ಶಿಕ್ಷೆಯಾಗಬೇಕೆಂದು ಒತ್ತಾಯಿಸಿದ್ದಾರೆ.

ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮೊದಲ ದೂರು ದಾಖಲಾಗಿದೆ. ನೊಂದ ಸಂತ್ರಸ್ತೆ ಕೊನೆಗೂ ಮಹಿಳಾ ಆಯೋಗಕ್ಕೆ ದೂರು ನೀಡಿದ್ದಾರೆ. ಸಂತ್ರಸ್ತೆ ಮೊದಲು ಫೋನ್ ಕಾಲ್ ಮೂಲಕ ದೂರು ನೀಡಿದ್ದರೆ, ನಂತರ ಮಹಿಳಾ ಆಯೋಗಕ್ಕೆ ವಾಟ್ಸಾಪ್ ಮೂಲಕ ದೂರು ನೀಡಿದ್ದಾರೆ. ಅಲ್ಲದೇ ಇನ್ನೊಂದೆಡೆ ಸಂಸದ ಪ್ರಜ್ವಲ್ ರೇವಣ್ಣ ತಂದೆ ಹಾಗೂ ಮಾಜಿ ಸಚಿವ ಹೆಚ್.ಡಿ.ರೇವಣ್ಣ ವಿರುದ್ಧವೂ ದೌರ್ಜನ್ಯ ಆರೋಪ ಕೇಳಿಬಂದಿದೆ. ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ಇನ್ನೊಂದು ದೂರು ದಾಖಲಿಸಿದ್ದಾರೆ.

ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ದೂರು ದಾಖಲಾಗಿದೆ. ಎಫ್‌ಐಆರ್‌ನಲ್ಲಿ ಹೆಚ್.ಡಿ.ರೇವಣ್ಣ ಎ1 ಮತ್ತು ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದಾರೆ. 354 ಂ, 354 ಆ, 509 ಅಡಿ ಪ್ರಕರಣ ದಾಖಲಾಗಿದೆ. 2015 ರಲ್ಲಿ ಹೆಚ್.ಡಿ.ರೇವಣ್ಣ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ನೀಡಿದ್ದಾರೆ. ತಂದೆ ಮತ್ತು ಮಗನ ವಿರುದ್ಧ ಸಂತ್ರಸ್ತೆ ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ಎಫ್‌ಐಆರ್‌ನಲ್ಲಿ "ಹೆಚ್.ಡಿ.ರೇವಣ್ಣ ಅವರು ನನಗೆ ಹಾಸ್ಟೆಲ್‌ವೊಂದರಲ್ಲಿ ಅಡುಗೆ ಕೆಲಸ ಕೊಡಿಸಿದ್ದರು. 2013 ರಲ್ಲಿ ಕೆಲಸ ಕೊಡಿಸುವುದಾಗಿ ಹೇಳಿ ಆಗಾಗ್ಗೆ ಮನೆಗೆ ಬರುವಂತೆ ಹೇಳುತ್ತಿದ್ದರು. ಭವಾನಿ ರೇವಣ್ಣ ನನ್ನ ಸೋದರತ್ತೆ ಮಗಳು. 2015 ರಲ್ಲಿ ರೇವಣ್ಣರ ಮಾತಿನಂತೆ ಹಾಸ್ಟೆಲ್ ಕೆಲಸಕ್ಕೆ ಸೇರಿಕೊಂಡಿದ್ದೆ. ಅದಾದ ನಾಲ್ಕು ವರ್ಷಗಳ ನಂತರ ಅವರ ಮೊದಲನೇ ಪುತ್ರ ಸೂರಜ್ ರೇವಣ್ಣ ಮದುವೆ ಸಮಯದಲ್ಲಿ ಮನೆಯ ಕೆಲಸ ಮಾಡುವಂತೆ ಕರೆಸಿಕೊಂಡಿದ್ದರು. ಅಲ್ಲಿ ಮೂರೂವರೆ ವರ್ಷಗಳ ಕಾಲ ಕೆಲಸ ಮಾಡಿಕೊಂಡಿದ್ದೆ. ಅವರ ಮನೆಗೆ ಕೆಲಸಕ್ಕೆ ಸೇರಿಕೊಂಡ ನಾಲ್ಕು ತಿಂಗಳ ನಂತರ ರೇವಣ್ಣ ಅವರು ತಮ್ಮ ಕೊಠಡಿಗೆ ಬರುವಂತೆ ಆಹ್ವಾನಿಸುತ್ತಿದ್ದರು.

ಮನೆಯಲ್ಲಿ 6 ಜನ ಹೆಣ್ಣುಮಕ್ಕಳು ಕೆಲಸ ಮಾಡುತ್ತಿದ್ದರು. ಎಲ್ಲರೂ ಪ್ರಜ್ವಲ್ ರೇವಣ್ಣ ಅವರು ಬಂದಾಗ ನಮಗೆ ಭಯವಾಗುತ್ತದೆ ಎಂದು ಭಯ ಹೊರ ಹಾಕುತ್ತಿದ್ದರು. ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಹುಡುಗರು ಸಹ ನನಗೆ ಮತ್ತು ಕೆಲಸ ಮಾಡುತ್ತಿದ್ದ ಹೆಣ್ಣುಮಕ್ಕಳಿಗೆ ಎಚ್ಚರಿಕೆಯಿಂದ ಇರುವಂತೆ ಹೇಳುತ್ತಿದ್ದರು. ಭವಾನಿ ಅವರು ಮನೆಯಲ್ಲಿ ಇಲ್ಲದಿದ್ದ ಸಮಯದಲ್ಲಿ ರೇವಣ್ಣ ಅವರು ಸ್ಟೋರ್ ರೂಮ್‌ನಲ್ಲಿ ಕೈ ಹಿಡಿದು ಎಳೆಯುತ್ತಿದ್ದರು. ಹಣ್ಣು ಕೊಡುವ ಮೈ ಮುಟ್ಟುತ್ತಿದ್ದರು. ಸೀರೆಯ ಪಿನ್ ಕಿತ್ತು ಲೈಂಗಿಕ ದೌರ್ಜನ್ಯ ನಡೆಸುತ್ತಿದ್ದರು.

ಪ್ರಜ್ವಲ್ ರೇವಣ್ಣ ಅಡುಗೆ ಮನೆಯಲ್ಲಿ ಇದ್ದಾಗ ಹಿಂದಿನಿಂದ ಬಂದು ಮೈ ಮುಟ್ಟುತ್ತಾ ಹೊಟ್ಟೆ ಭಾಗದಲ್ಲಿ ಜಿಗುಟುತ್ತಿದ್ದರು. ಎಣ್ಣೆ ಹಚ್ಚಲು ನನ್ನನ್ನು ಕಳಿಸು ಎಂದು ಕೆಲಸ ಮಾಡುವ ಹುಡುಗನ ಹೇಳಿ ಕಳುಹಿಸುತ್ತಿದ್ದರು. ಇದೇ ಹಲವಾರು ಬಾರಿ ಲೈಂಗಿಕ ದೌರ್ಜನ್ಯ ನಡೆಸುತ್ತಿದ್ದರು. ಮನೆಯಲ್ಲಿದ್ದಾಗ ಫೋನ್ ಮಾಡುತ್ತಿದ್ದರು. ನನ್ನ ಮಗಳು ಇದ್ದಾಗ ವೀಡಿಯೋ ಕಾಲ್ ಮಾಡಿ ಅಸಭ್ಯ ಸಂಭಾಷಣೆ ಮೂಲಕ ಪ್ರಚೋದಿಸಲು ಯತ್ನಿಸುತ್ತಿದ್ದರು. ಮಗಳು ಹೆದರಿಕೊಂಡು ನಂಬರ್ ಬ್ಲಾಕ್ ಮಾಡಿದ್ದಳು. ಇದರಿಂದ ಮನೆಯಿಂದ ಕೆಲಸ ಬಿಟ್ಟು ಹೊರ ಬಂದೆ.
ಈಚೆಗೆ ಜಿಲ್ಲೆಯಾದ್ಯಂತ ಪ್ರಜ್ವಲ್ ರೇವಣ್ಣ ಅವರು ನಡೆಸಿದ್ದಾರೆ ಎನ್ನಲಾದ ಲೈಂಗಿಕ ದೌರ್ಜನ್ಯದ ವೀಡಿಯೋ ವಾಟ್ಸಪ್‌ನಲ್ಲಿ ಹರಿದಾಡುತ್ತಿದೆ. ಅದರಲ್ಲಿ ನನ್ನ ವೀಡಿಯೋಗಳು ಕೂಡ ಇದೆ. ಮತ್ತೊಬ್ಬ ಮಹಿಳೆಯ ವೀಡಿಯೋ ಕೂಡ ಇದ್ದು, ಆಕೆಯ ಪತಿ ಕೂಡ ಭಯಭೀತರಾಗಿದ್ದಾರೆ. ಇದರಿಂದ ಮಾನಸಿಕ ಹಿಂಸೆ ಆಗಿದ್ದು, ಹಲವಾರು ಮಹಿಳೆಯರ ಮೇಲೆ ನಡೆಸಿರುವ ಲೈಂಗಿಕ ದೌರ್ಜನ್ಯದ ಬಗ್ಗೆ ಸುದ್ದಿ ಮಾಧ್ಯಮವೊಂದರಲ್ಲಿ ಪ್ರಸಾರವಾಗಿದೆ. ಇದನ್ನು ನೋಡಿ ವಾಹಿನಿಗೆ ಬಂದು ಹೇಳಿಕೆ ನೀಡಿದ್ದೇನೆ. ನನಗೆ ಜೀವ ಭಯ ಇರುವುದರಿಂದ ನಮ್ಮ ವಿರುದ್ಧ ಲೈಂಗಿಕ ದೌರ್ಜನ್ಯ ಎಸಗಿರುವ ಹೆಚ್.ಡಿ.ರೇವಣ್ಣ ಹಾಗೂ ಪ್ರಜ್ವಲ್ ರೇವಣ್ಣ ವಿರುದ್ಧ ಕಾನೂನು ರೀತಿ ಕ್ರಮಕೈಗೊಳ್ಳಬೇಕು ಎಂದು ದೂರಿನಲ್ಲಿ ಸಂತ್ರಸ್ತೆ ಮನವಿ ಮಾಡಿದ್ದಾರೆ.

ಸಂಸದ ಪ್ರಜ್ವಲ್ ರೇವಣ್ಣ ತಂದೆ ಹಾಗೂ ಮಾಜಿ ಸಚಿವ ಹೆಚ್.ಡಿ.ರೇವಣ್ಣ ವಿರುದ್ಧವೂ ದೌರ್ಜನ್ಯ ಆರೋಪ ಕೇಳಿಬಂದಿದೆ. ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ದಾಖಲಿಸಿದ್ದಾರೆ. ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಪ್ರಜ್ವಲ್ ರೇವಣ್ಣ ಮತ್ತು ಹೆಚ್.ಡಿ ರೇವಣ್ಣ ವಿರುದ್ಧ ದೂರು ದಾಖಲಾಗಿದೆ. ಅದರನ್ವಯ ಎಫ್‌ಐಆರ್‌ನಲ್ಲಿ ಹೆಚ್.ಡಿ.ರೇವಣ್ಣ ಎ1 ಮತ್ತು ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಧ್ಯಮಗಳಿಗೆ ಮೊದಲ ಪ್ರತಿಕ್ರಿಯೆ ನೀಡಿದ ಅವರು, ನಾಲ್ಕೈದು ವರ್ಷದ ಕಥೆ ತಂದು ಈಗ ದೂರು ಕೊಟ್ರೆ ಏನರ್ಥ ಎಂದಿದ್ದಾರೆ. ಇದೆಲ್ಲಾ ಷಡ್ಯಂತ್ರ, ಇದಕ್ಕೆಲ್ಲಾ ಹೆದರಿ ಓಡಿ ಹೋಗಲ್ಲ. ಕಾನೂನು ಹೋರಾಟ ಮಾಡ್ತಿನಿ. ನನ್ನ ವಿರುದ್ಧ ನೀಡಿದ ದೂರಿನ ಬಗ್ಗೆ, ಯಾವುದೇ ಪ್ರತಿಕ್ರಿಯೆ ಕೊಡಲ್ಲ. ಸರ್ಕಾರ ಎಸ್‌ಐಟಿಗೆ ವಹಿಸಿದೆಯಲ್ಲಾ, ಎಸ್‌ಐಟಿ ತನಿಖೆ ಮಾಡಲಿ. ಪ್ರಜ್ವಲ್ ರೇವಣ್ಣ ವಿದೇಶ ಪ್ರಯಾಣ ಮೊದಲೇ ನಿರ್ಧಾರವಾಗಿತ್ತು. ಎಫ್‌ಐಆರ್ ಹಾಕ್ತಾರೆ ಅನ್ನೋದು ಗೊತ್ತಿರಲಿಲ್ಲ. ತನಿಖೆಗೆ ಕರೆದರೆ ಅವನೂ ರ್‍ತಾನೆ. ದೇವೇಗೌಡರ ಕುಟುಂಬದ ವಿರುದ್ಧ ಷಡ್ಯಂತ್ರ ಹೊಸದಲ್ಲ. ಇಂತಹ ಹಲವು ತನಿಖೆ ನಾವು ಎದುರಿಸಿದ್ದೇವೆ. ದೇವೇಗೌಡರ ಮೇಲೆ ಸಿಒಡಿ ತನಿಖೆ ನಡೆಸಿದ್ದರು, ನಾನು ದೇವೇಗೌಡರ ಬಳಿ ಈ ವಿಷಯ ಮಾತನಾಡಿಲ್ಲ. ಕಾನೂನು ರೀತಿ ಏನಿದೆ ಅದು ನಡೆಯಲಿ ಎಂದು ಹೇಳಿದ್ದಾರೆ.

ಒಟ್ಟಿನಲ್ಲಿ ಬಹಳ ಗಂಭೀರವಾಗಿರುವ ಈ ಪ್ರಕರಣದ ಕುರಿತು ಈಗಲೇ ಏನನ್ನೂ ನಿಖರವಾಗಿ ಹೇಳಲಾಗುವುದಿಲ್ಲ. ಮುಂದೇನಾಗುತ್ತೋ ಕಾದು "ನೋಡೋಣ" ಅಷ್ಟೇ, ಅಂತೆಯೇ ಅಪರಾಧಿಗಳಿಗೆ ತಕ್ಕ ಶಿಕ್ಷೆಯಾಗಲಿ, ಆದರೆ ಹತ್ತು ಅಪರಾಧಿಗಳಿಗೆ ಶಿಕ್ಷೆಯಾಗದಿದ್ದರೂ ಒಬ್ಬ ನಿರಪರಾಧಿಗೆ ಯಾವುದೇ ಶಿಕ್ಷೆಯಾಗದಿರಲಿ.